**All India Radio: Bangalore**
**National Bulletin In Kannada**
**15.12.2025 1.10 pm**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**15.12.2025 1.10 pm**

**<>><><*><><<>**

ಮುಖ್ಯಾಂಶಗಳು

**೧. ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಆಕ್ಷೇಪಾರ್ಹ ಹೇಳಿಕೆ ; ಲೋಕಸಭೆ ಕಲಾಪ ಮಧ್ಯಾಹ್ನ ೨ ಗಂಟೆಗೆ ಮುಂದೂಡಿಕೆ**

**೨. ಮೂರು ರಾಷ್ಟ್ರಗಳ ಪ್ರವಾಸ ಹಿನ್ನೆಲೆಯಲ್ಲಿ ಇಂದು ಜೋರ್ಡಾನ್‌ಗೆ ಪ್ರಧಾನಿ ಭೇಟಿ**

**೩. ಅಬುದಾಬಿಯಲ್ಲಿಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಸಹ ಅಧ್ಯಕ್ಷತೆಯಲ್ಲಿ ಭಾರತ-ಯುಎಇ ಕಾರ್ಯತಂತ್ರದ ಸಂವಾದ**

**೪. ಎಸ್‌ಡಿಎಟಿ ಸ್ಕ್ವ್ಯಾಷ್ ವಿಶ್ವಕಪ್ ವಿಜೇತ ಭಾರತ ತಂಡಕ್ಕೆ ಗಣ್ಯರಿಂದ ಅಭಿನಂದನೆ**

**<>><><*><><<>**

ಪ್ರಧಾನಿ ನರೇಂದ್ರ ಮೋದಿ ಅವರ ವಿರುದ್ಧ ಆಕ್ಷೇಪಾರ್ಹ ಹೇಳಿಕೆ ನೀಡಿದಕ್ಕಾಗಿ ಕಾಂಗ್ರೆಸ್ ನಾಯಕತ್ವ ಕ್ಷಮೆಯಾಚಿಸಬೇಕೆಂದು ಒತ್ತಾಯಿಸಿ ಎನ್‌ಡಿಎ ಸಂಸದರು ಪ್ರತಿಭಟನೆ ನಡೆಸಿದ ಹಿನ್ನೆಲೆಯಲ್ಲಿ ಲೋಕಸಭೆ ಕಲಾಪವನ್ನು ಮಧ್ಯಾಹ್ನ ೨ ಗಂಟೆಯವರೆಗೆ ಮುಂದೂಡಲಾಗಿದೆ. ಲೋಕಸಭೆಯಲ್ಲಿ ಇಂದು ೧೧ ಗಂಟೆಗೆ ಸದನ ಸೇರಿದಾಗ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಮಾತನಾಡಿ, ನವದೆಹಲಿಯಲ್ಲಿ ನಿನ್ನೆ ನಡೆದ ಕಾಂಗ್ರೆಸ್ ರ‍್ಯಾಲಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ವಿರುದ್ಧ ಮಾಡಿದ ಘೋಷಣೆಗಳನ್ನು ಖಂಡಿಸಿ ಸದನದಲ್ಲಿ ಈ ವಿಷಯವನ್ನು ಪ್ರಸ್ತಾಪಿಸಿದರು. ಈ ರೀತಿಯ ಘಟನೆಯು ನಾಚಿಕೆಗೇಡಿನ ಮತ್ತು ದುರದುಷ್ಟಕರವಾಗಿದೆ ಎಂದು ಅವರು ಹೇಳಿದರು. ಈ ವೇಳೆ ಗದ್ದಲ ಉಂಟಾದ ಕಾರಣ ಕಲಾಪವನ್ನು ಮಧ್ಯಾಹ್ನ ೧೨ ಗಂಟೆಗೆ ಮುಂದೂಡಲಾಯಿತು. ಪುನಃ ಮಧ್ಯಾಹ್ನ ೧೨ ಗಂಟೆಗೆ ಸದನ ಸಮಾವೇಶಗೊಂಡಾಗ ಇದೇ ವಿಷಯವಾಗಿ ಗದ್ದಲ ಮುಂದುವರಿದ ಹಿನ್ನೆಲೆಯಲ್ಲಿ ಲೋಕಸಭಾಧ್ಯಕ್ಷರು ಕಲಾಪವನ್ನು ಮಧ್ಯಾಹ್ನ ೨ ಗಂಟೆಗೆ ಮುಂದೂಡಿದರು. ಇನ್ನೊಂದೆಡೆ ರಾಜ್ಯಸಭೆಯಲ್ಲಿ ಕೂಡ ಇದೇ ರೀತಿಯ ದೃಶ್ಯ ಕಂಡು ಬಂತು. ಇಂದು ಬೆಳಗ್ಗೆ ಸದನ ಸಮಾವೇಶಗೊಂಡಾಗ ಸದನದ ನಾಯಕ ಜೆ.ಪಿ. ನಡ್ಡಾ ಮಾತನಾಡಿ, ಪ್ರಧಾನಿ ನರೇಂದ್ರ ಮೋದಿ ಅವರ ವಿರುದ್ಧದ ಆಕ್ಷೇಪಾರ್ಹ ಹೇಳಿಕೆಗೆ ಸಂಬಂಧಿಸಿದಂತೆ ರಾಜ್ಯಸಭೆಯ ವಿರೋಧಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಮತ್ತು ಕಾಂಗ್ರೆಸ್ ಹಿರಿಯ ನಾಯಕಿ ಸೋನಿಯಾಗಾಂಧಿ ಕ್ಷಮೆಯಾಚಿಸಬೇಕು ಎಂದು ಒತ್ತಾಯಿಸಿದರು. ಇಂತಹ ಪ್ರತಿಕೂಲ ಹೇಳಿಕೆಗಳು ಕಾಂಗ್ರೆಸ್ ಪಕ್ಷದ ಚಿಂತನೆ ಮತ್ತು ಮನಸ್ಥಿತಿಯನ್ನು ತೋರಿಸುತ್ತದೆ ಎಂದು ಹೇಳಿದರು. ಈ ವೇಳೆ ಗದ್ದಲ ಉಂಟಾದ ಕಾರಣ ಉಪಸಭಾಪತಿ ಹರಿವಂಶ್, ಸದನವನ್ನು ಮಧ್ಯಾಹ್ನ ೧೨ ಗಂಟೆಗೆ ಮುಂದೂಡಿದರು. ಪುನಃ ಮಧ್ಯಾಹ್ನ ೧೨ ಗಂಟೆಗೆ ಸದನ ಸಮಾವೇಶಗೊಂಡಿದ್ದು, ಕಲಾಪ ಪ್ರಗತಿಯಲ್ಲಿದೆ.

**<>><><*><><<>**

ನವದೆಹಲಿಯಲ್ಲಿ ನಿನ್ನೆ ನಡೆದ ಕಾಂಗ್ರೆಸ್ ರ‍್ಯಾಲಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ವಿರುದ್ಧ ಕೇಳಿಬಂದ ಆಕ್ಷೇಪಾರ್ಹ ಘೋಷಣೆಗಳನ್ನು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಖಂಡಿಸಿದ್ದಾರೆ. ಈ ಕುರಿತು ಲೋಕಸಭೆ ಮತ್ತು ರಾಜ್ಯಸಭೆಯಲ್ಲಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಹಾಗೂ ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿ ದೇಶದ ಕ್ಷಮೆಯಾಚಿಸಬೇಕು ಎಂದು ಆಗ್ರಹಿಸಿದ್ದಾರೆ. ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವ ರಿಜಿಜು, ಬಿಜೆಪಿ ಮತ್ತು ಎನ್‌ಡಿಎ ಎಂದಿಗೂ ಯಾರನ್ನೂ ಅಗೌರವಿಸಿಲ್ಲ ಅಥವಾ ಯಾರ ಜೀವಕ್ಕೂ ಬೆದರಿಕೆ ಹಾಕಿಲ್ಲ. ವಿರೋಧ ಪಕ್ಷಗಳನ್ನು ಶತೃಗಳಂತೆ ಅಲ್ಲ ಬದಲಾಗಿ ರಾಜಕೀಯ ಸಿದ್ಧಾಂತದ ವಿರೋಧಿಗಳಂತೆ ಪರಿಗಣಿಸುವಂತೆ ಪಕ್ಷದ ನಾಯಕರಿಗೆ ಯಾವಾಗಲೂ ಪ್ರಧಾನಿ ನರೇಂದ್ರ ಮೋದಿ ಸಲಹೆ ನೀಡಿದ್ದಾರೆ ಎಂದು ಹೇಳಿದರು.

**ಧ್ವನಿ: ಕಿರಣ್ ರಿಜಿಜು ( ೨೨ ಸೆಕೆಂಡ್ಸ್)**

**<>><><*><><<>**

ಪ್ರಧಾನಿ ನರೇಂದ್ರ ಮೋದಿ ಅವರು ಇಂದಿನಿಂದ ಜೋರ್ಡಾನ್, ಇಥಿಯೋಪಿಯಾ ಮತ್ತು ಓಮನ್ ಸೇರಿ ಮೂರು ರಾಷ್ಟ್ರಗಳ ಭೇಟಿಯನ್ನು ಕೈಗೊಂಡಿದ್ದಾರೆ. ಪ್ರವಾಸದ ಮೊದಲ ಚರಣದಲ್ಲಿ ಅವರು ಇಂದು ಜೋರ್ಡಾನ್‌ಗೆ ಪ್ರಯಾಣ ಆರಂಭಿಸಿದ್ದಾರೆ. ಭೇಟಿಯ ಸಮಯದಲ್ಲಿ ರಾಜ ಎರಡನೇ ಅಬ್ದುಲ್ಲಾ ಇಬ್ನ್ ಅಲ್ ಹುಸೇನ್ ಅವರ ಆಹ್ವಾನದ ಮೇರೆಗೆ ಪ್ರಧಾನಿ ಮೋದಿ ಜೋರ್ಡಾನ್‌ಗೆ ಭೇಟಿ ನೀಡಲಿದ್ದಾರೆ. ಈ ವೇಳೆ, ಪ್ರಧಾನಿ ಮೋದಿ ಅವರು, ಜೋರ್ಡಾನ್ ರಾಜರನ್ನು ಭೇಟಿ ಮಾಡಿ ಪ್ರಾದೇಶಿಕ ವಿಷಯಗಳ ಕುರಿತು ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಎರಡೂ ದೇಶಗಳ ನಡುವಿನ ರಾಜತಾಂತ್ರಿಕ ಸಂಬಂಧಗಳ ಸ್ಥಾಪನೆಯ ೭೫ ನೇ ವಾರ್ಷಿಕೋತ್ಸವ ಹಿನ್ನೆಲೆಯಲ್ಲಿ ಪ್ರಧಾನಿ ಮೋದಿ ಜೋರ್ಡಾನ್‌ಗೆ ಭೇಟಿ ನೀಡುತ್ತಿದ್ದಾರೆ. ಈ ಸಂದರ್ಭದಲ್ಲಿ ಭಾರತ ಮತ್ತು ಜೋರ್ಡಾನ್ ನಡುವೆ ಉನ್ನತ ಮಟ್ಟದ ರಾಜಕೀಯ ಒಪ್ಪಂದ ಏರ್ಪಡುವ ಸಾಧ್ಯತೆಯಿದೆ. ಭಾರತ ಮತ್ತು ಜೋರ್ಡಾನ್ ಬಲವಾದ ಮತ್ತು ಸ್ಥಿರವಾಗಿ ವಿಸ್ತರಿಸುತ್ತಿರುವ ಆರ್ಥಿಕ ಸಂಬಂಧಗಳನ್ನು ಹಂಚಿಕೊಳ್ಳುತ್ತವೆ. ಭಾರತವು ಜೋರ್ಡಾನ್‌ನ ಮೂರನೇ ಅತಿದೊಡ್ಡ ವ್ಯಾಪಾರ ಪಾಲುದಾರನಾಗಿ ಹೊರಹೊಮ್ಮುತ್ತಿದೆ. ಎರಡೂ ದೇಶಗಳ ನಡುವಿನ ದ್ವಿಪಕ್ಷೀಯ ವ್ಯಾಪಾರವು ಸುಮಾರು ೨.೮ ಶತಕೋಟಿ ಅಮೆರಿಕನ್ ಡಾಲರ್‌ಗಳ ಮೌಲ್ಯದ್ದಾಗಿದೆ. ಜೋರ್ಡಾನ್ ಭಾರತಕ್ಕೆ ರಸಗೊಬ್ಬರಗಳ ಪ್ರಮುಖ ಪೂರೈಕೆದಾರ, ವಿಶೇಷವಾಗಿ ಫಾಸ್ಫೇಟ್‌ಗಳು ಮತ್ತು ಪೊಟ್ಯಾಶ್, ಇವು ಭಾರತದ ಕೃಷಿ ವಲಯಕ್ಕೆ ನಿರ್ಣಾಯಕವಾಗಿವೆ. ನಾಳೆ, ಪ್ರಧಾನಿ ಮೋದಿ ಅವರು ಇಥಿಯೋಪಿಯಾಕ್ಕೆ ತೆರಳಲಿದ್ದಾರೆ. ಇದು ಆ ದೇಶಕ್ಕೆ ಪ್ರಧಾನಿ ಮೋದಿ ಅವರ ಮೊದಲ ಭೇಟಿಯಾಗಿದೆ. ಈ ವೇಳೆ ಅವರು ಇಥಿಯೋಪಿಯಾ ಪ್ರಧಾನಿಯನ್ನು ಭೇಟಿ ಮಾಡಲಿದ್ದಾರೆ ಮತ್ತು ಭಾರತ-ಇಥಿಯೋಪಿಯಾ ದ್ವಿಪಕ್ಷೀಯ ಸಂಬಂಧಗಳ ಎಲ್ಲಾ ಅಂಶಗಳ ಕುರಿತು ವ್ಯಾಪಕ ಚರ್ಚೆಗಳನ್ನು ನಡೆಸಲಿದ್ದಾರೆ. ಪ್ರವಾಸದ ಅಂತಿಮ ಚರಣದಲ್ಲಿ, ಪ್ರಧಾನಿ ನರೇಂದ್ರ ಮೋದಿ ಅವರು ಒಮಾನ್‌ಗೆ ಭೇಟಿ ನೀಡಲಿದ್ದು, ಸುಲ್ತಾನ್ ಹೈತಮ್ ಇಬ್ನ್ ತಾರಿಕ್ ಅವರನ್ನು ಭೇಟಿ ಮಾಡಲಿದ್ದಾರೆ. ಈ ಭೇಟಿಯು ಎರಡೂ ದೇಶಗಳ ನಡುವಿನ ರಾಜತಾಂತ್ರಿಕ ಸಂಬಂಧಗಳ ಸ್ಥಾಪನೆಯ ೭೦ ವರ್ಷಗಳನ್ನು ಗುರುತಿಸುತ್ತದೆ.

**<>><><*><><<>**

ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಹಾಗೂ ಯುಎಇ ಉಪ ಪ್ರಧಾನಿಯ ಮತ್ತು ವಿದೇಶಾಂಗ ಸಚಿವ ಶೇಖ್ ಅಬ್ದುಲ್ಲಾ ಬಿನ್ ಜಾಯೆದ್ ಅಲ್ ನಹ್ಯಾನ್ ಅವರೊಂದಿಗೆ, ಅಬುದಾಬಿಯಲ್ಲಿ ಇಂದು ನಡೆಯಲಿರುವ ೧೬ನೇ ಭಾರತ-ಯುಎಇ ಜಂಟಿ ಆಯೋಗ ಮತ್ತು ೫ನೇ ಕಾರ್ಯತಂತ್ರದ ಸಂವಾದದ ಸಹ ಅಧ್ಯಕ್ಷತೆ ವಹಿಸಲಿದ್ದಾರೆ.

ನಂತರ ಡಾ. ಎಸ್. ಜೈಶಂಕರ್ ಅವರು, ಇಸ್ರೇಲ್‌ಗೆ ಭೇಟಿ ನೀಡಲಿದ್ದು, ಇಸ್ರೇಲ್ ಪ್ರಧಾನಿ ಗಿಡಿಯಾನ್ ಸಾರ್ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ.

<>><><*><><<>

ಉಕ್ಕಿನ ಮನುಷ್ಯ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ೭೫ನೇ ಪುಣ್ಯ ತಿಥಿಯಂದು ಅವರಿಗೆ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ ಗೌರವ ನಮನ ಸಲ್ಲಿಸಿದ್ದಾರೆ.  ದೇಶವನ್ನು ಒಗ್ಗೂಡಿಸಲು ಸರ್ದಾರ್ ಪಟೇಲ್ ತಮ್ಮ ಜೀವನವನ್ನು ಮುಡಿಪಾಗಿಟ್ಟರು. ಅವಿಭಜಿತ ಮತ್ತು ಬಲಿಷ್ಠ ಭಾರತಕ್ಕಾಗಿ ಅವರು ನೀಡಿದ ಕೊಡುಗೆಯನ್ನು ರಾಷ್ಟ್ರವು ಯಾವಾಗಲೂ ನೆನಪಿಸಿಕೊಳ್ಳುತ್ತದೆ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

<>><><*><><<>

ಬುಡಕಟ್ಟು ವಿದ್ಯರ್ಥಿಗಳ ರಾಷ್ಟ್ರೀಯ ಶಿಕ್ಷಣ ಸಂಘವು ಇದೇ ೧೬ ಮತ್ತು ೧೭ರಂದು ನವದೆಹಲಿಯಲ್ಲಿ ಎರಡು ದಿನಗಳ ಪ್ರಾಂಶುಪಾಲರ ಸಮಾವೇಶವನ್ನು ಆಯೋಜಿಸಿದೆ. ದೇಶಾದ್ಯಂತ ಏಕಲವ್ಯ ಮಾದರಿ ವಸತಿ ಶಾಲೆಗಳ ಪ್ರಾಂಶುಪಾಲರ ಶೈಕ್ಷಣಿಕ, ಆಡಳಿತಾತ್ಮಕ, ಹಣಕಾಸು ಮತ್ತು ನಾಯಕತ್ವ ಸಾಮರ್ಥ್ಯಗಳನ್ನು ಬಲಪಡಿಸುವ ಗುರಿಯನ್ನು ಈ ಸಮಾವೇಶ ಹೊಂದಿದೆ. ಏಕಲವ್ಯ ಮಾದರಿ ವಸತಿ ಶಾಲೆಗಳಲ್ಲಿ ಜಾರಿಗೆ ತರಲಾಗುತ್ತಿರುವ ಪ್ರಸ್ತುತ ಯೋಜನೆಗಳು ಪ್ರಮುಖ ಉಪಕ್ರಮಗಳು ಮತ್ತು ಪಾಲುದಾರ ಬೆಂಬಲಿತ ಕಾರ್ಯಕ್ರಮಗಳ ಕುರಿತು ಮಾರ್ಗದರ್ಶನ ನೀಡುವುದು ಈ ಸಮಾವೇಶದ ಮುಖ್ಯ ವಿಷಯವಾಗಿದೆ. ಈ ಸಮಾವೇಶದಲ್ಲಿ ದೇಶಾದ್ಯಂತ ಇರುವ ೪೯೯ ಏಕಲವ್ಯ ಮಾದರಿ ವಸತಿ ಶಾಲೆಗಳ ಪ್ರಾಂಶುಪಾಲರು ಪಾಲ್ಗೊಳ್ಳಲಿದ್ದಾರೆ ಎಂದು ಬುಡಕಟ್ಟು ವ್ಯವಹಾರಗಳ ಸಚಿವಾಲಯ ತಿಳಿಸಿದೆ.

<>><><*><><<>

ಇಂದಿನಿಂದ ಅಮೆರಿಕ ಸರ್ಕಾರವು ಹೆಚ್-೧ಬಿ ಮತ್ತು ಅದರ ಅವಲಂಬಿತ ಹೆಚ್-೪ ವೀಸಾ ಅರ್ಜಿದಾರರ ವರ್ಧಿತ ಸ್ಕ್ರೀನಿಂಗ್ ಮತ್ತು ಪರಿಶೀಲನೆಯನ್ನು ಪ್ರಾರಂಭಿಸಲಿದೆ. ಈ ಪರಿಶೀಲನಾ ಕ್ರಮದಲ್ಲಿ ಅರ್ಜಿದಾರರ ಸಾಮಾಜಿಕ ಮಾಧ್ಯಮ ಪ್ರೊಫೈಲ್‌ಗಳ ಪರಿಶೀಲನೆಯೂ ಸೇರಿದೆ.  ಹೊಸ ಆದೇಶದ ಅನ್ವಯ, ಇಂದಿನಿಂದ, ಎಲ್ಲಾ ಹೆಚ್-೧ಬಿ ಅರ್ಜಿದಾರರು ಮತ್ತು ಅವರ ಅವಲಂಬಿತರಿಗೆ ಆನ್‌ಲೈನ್ ಉಪಸ್ಥಿತಿಯ ಪರಿಶೀಲನೆಯನ್ನು ನಡೆಸಲಾಗುವುದು ಎಂದು ವಿದೇಶಾಂಗ ಇಲಾಖೆ ತಿಳಿಸಿದೆ.

<>><><*><><<>

ಬಾಂಗ್ಲಾದೇಶ ಮಾಜಿ ಪ್ರಧಾನಿ ಶೇಖ್ ಹಸೀನಾ ಅವರ ಬೆಂಬಲಿಗರಿಗೆ ಪ್ರಚೋಧನಾಕಾರಿ ಹೇಳಿಕೆಗಳನ್ನು ನೀಡಲು ಭಾರತ ಅವಕಾಶ ನೀಡುತ್ತಿದೆ ಎಂಬ ಬಾಂಗ್ಲಾದೇಶ ಮಧ್ಯಂತರ ಸರ್ಕಾರದ ಆರೋಪವನ್ನು ಭಾರತ ಸ್ಪಷ್ಟವಾಗಿ ತಳ್ಳಿ ಹಾಕಿದೆ. ಬಾಂಗ್ಲಾದೇಶದಲ್ಲಿ ಮುಕ್ತ, ನ್ಯಾಯಯುತ, ಎಲ್ಲರನ್ನು ಒಳಗೊಂಡ ಮತ್ತು ವಿಶ್ವಾಸಾರ್ಹ ಚುನಾವಣೆಗಳು ಶಾಂತಿಯುತ ವಾತಾವರಣದಲ್ಲಿ ನಡೆಯಬೇಕೆಂಬ ಪರವಾಗಿ ಭಾರತ ತನ್ನ ನಿಲುವನ್ನು ನಿರಂತರವಾಗಿ ಪುನರುಚ್ಚರಿಸಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

<>><><*><><<>

೨೦೨೫ ರ ಎಸ್‌ಡಿಎಟಿ ಸ್ಕ್ವಾಷ್ ವಿಶ್ವಕಪ್‌ನಲ್ಲಿ ಮೊದಲ ವಿಶ್ವಕಪ್ ಪ್ರಶಸ್ತಿಯನ್ನು ಗೆಲ್ಲುವ ಮೂಲಕ ಇತಿಹಾಸ ಸೃಷ್ಟಿಸಿದ ಭಾರತೀಯ ಸ್ಕ್ವಾಷ್ ತಂಡವನ್ನು ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಅಭಿನಂದಿಸಿದ್ದಾರೆ.  ಜೋಶ್ನಾ ಚಿನ್ನಪ್ಪ, ಅಭಯ್ ಸಿಂಗ್, ವೆಲವನ್ ಸೆಂಥಿಲ್ ಕುಮಾರ್ ಮತ್ತು ಅನಾಹತ್ ಸಿಂಗ್

ಅವರ ಅಸಾಧಾರಣ ಪ್ರದರ್ಶನವನ್ನು ಶ್ಲಾಘಿಸಿದ ಪ್ರಧಾನಿ ನರೇಂದ್ರ ಮೋದಿ ಅವರು, ೨೦೨೫ ರ ಎಸ್‌ಡಿಎಟಿ ಸ್ಕ್ವಾಷ್ ವಿಶ್ವಕಪ್‌ನಲ್ಲಿ ಅವರ ಸಮರ್ಪಣೆ, ಶಿಸ್ತು ಮತ್ತು ದೃಢಸಂಕಲ್ಪವು ರಾಷ್ಟ್ರಕ್ಕೆ ಅಪಾರ ಹೆಮ್ಮೆಯನ್ನು ತಂದಿz. ಈ ಸಾಧನೆಯು ಜಾಗತಿಕ ವೇದಿಕೆಯಲ್ಲಿ ಭಾರತೀಯ ಕ್ರೀಡೆಗಳು ಬೆಳೆಯುತ್ತಿರುವ ಶಕ್ತಿಯನ್ನು ಪ್ರತಿಬಿಂಬಿಸುತ್ತದೆ ಎಂದು ತಿಳಿಸಿದ್ದಾರೆ. ಸ್ಕ್ವಾಷ್ ತಂಡವು ದೇಶಕ್ಕೆ ಅದ್ಭುತ ಇತಿಹಾಸ ಬರೆದಿದೆ. ಅವರ ಅದಮ್ಯ ಕ್ರೀಡಾ ಉತ್ಸಾಹವು ಹೊಸ ಪ್ರತಿಭೆಗಳಿಗೆ ಸ್ಫೂರ್ತಿಯಾಗಲಿದೆ ಎಂದು ಸಚಿವ ಅಮಿತ್ ಶಾ ಹೇಳಿದ್ದಾರೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೩೦ ಕ್ಕೆ ><><<>**